ಗ್ರಾಮಾಂತರ ಪ್ರದೇಶದಲ್ಲಿ ಜಲ್ಲಿ ಕ್ರಶ್ಕರ್ ಕಾರ್ಯಾಗಾರಕ್ಕೆ ಪರವಾನಗಿ ಕೊಡುವ ಬಗ್ಗೆ

2125: ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ):– ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಗ್ರಾಮಾಂತರ ಪ್ರದೇಶದಲ್ಲಿ ಜಲ್ಲಿಕ್ರಶ್ಕರ್ ಕಾರ್ಯನಿರ್ವಹಿಸುತ್ತಿರುವ ಪ್ರದೇಶಗಳಲ್ಲಿ ರೈತರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಜಲ್ಲಿಕ್ರಶ್ಕರ್ ಕಾರ್ಯಾಗಾರಕ್ಕೆ ಪರವಾನಗಿ ಕೊಡುವಾಗ ಅಧಿಕಾರಿಗಳು ಆದರ ಒಳಿತು ಕೆಡಕುಗಳ ಬಗ್ಗೆ ಅಧ್ಯಯನ ಮಾಡುತ್ತಾರೆಯೇ ?

ಶ್ರೀ ಡಿ.ಎ. ಚಿಣ್ಣಪ್ಪ (ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು):–

ಅ. ಕೆಲವು ಪ್ರದೇಶದ ಬಗ್ಗೆ ಬಂದಿದೆ.

ಆ. ಕಲ್ಲುಗಣಿ ಗುತ್ತಿಗೆ ಮಂಜೂರಾತಿಯ ಬಗ್ಗೆ ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಜಲ್ಲಿ ಕ್ರಶ್ಕರ್ ಸ್ಥಾಪಿಸುವ ಬಗ್ಗೆ ತಿಳಿಸುವುದಿಲ್ಲ. ಇಲಾಖಾವತಿಯಿಂದ ಕಲ್ಲುಗಣಿ ಗುತ್ತಿಗೆಗಳನ್ನು ಮಾತ್ರ ಮಂಜೂರು ಮಾಡಲಾಗುತ್ತದೆ. ಜಲ್ಲಿ ಕ್ರಶ್ಕರ್ ಕಾರ್ಯಾಗಾರ ಸ್ಥಾಪನೆಯ ಬಗ್ಗೆ ಪರವಾನಗಿಯನ್ನು ಕೈಗಾರಿಕಾ ಇಲಾಖೆ ಹಾಗೂ ಕರ್ನಾಟಕ ರಾಜ್ಯದ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರಿಂದ ಪಡೆಯಬೇಕಾಗುತ್ತದೆ. ಕ್ರಶರ್‌ನಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಮುಖ್ಯವಾಗಿ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಶೀಲಿಸುತ್ತದೆ.

ಬೆಂಗಳೂರಿನ ಗಾಂಧಿನಗರದಲ್ಲಿರುವ ಕಾರ್ಮಿಕ ನ್ಯಾಯಾಲಯವನ್ನು ಸಿಟಿ ಕೋರ್ಟ್ ಆವರಣಕ್ಕೆ ಸ್ಥಳಾಂತರಿಸುವ ಬಗ್ಗೆ

1845: ಶ್ರೀ ಆರ್. ದಯಾನಂದ ರಾವ್ (ಗಾಂಧಿನಗರ):– ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಬೆಂಗಳೂರಿನ ಗಾಂಧಿನಗರದಲ್ಲಿರುವ ಕಾರ್ಮಿಕ ನ್ಯಾಯಾಲಯ ಕಟ್ಟಡದಲ್ಲಿ ವಾಹನ ನಿಲುಗಡೆ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಸದರೀ ನ್ಯಾಯಾಲಯದ ಕಟ್ಟಡದಲ್ಲಿ ನೀರು ಸರಬರಾಜು ಮತ್ತು ಶೌಚಾಲಯ ಸೌಲಭ್ಯಗಳು ಇಲ್ಲದೇ ಇರುವುದು ನಿಜವೇ;

ಇ. ಸದರಿ ಕಾರ್ಮಿಕ ನ್ಯಾಯಾಲಯವನ್ನು ಮೈಸೂರು ಬ್ಯಾಂಕ್ ವೃತ್ತದಲ್ಲಿರುವ ನಗರ ಸಿವಿಲ್ ನ್ಯಾಯಾಲಯ ಕಟ್ಟಡದ ಸಮುಚ್ಚಯಕ್ಕೆ ಸ್ಥಳಾಂತರಿಸಲು ವಕೀಲರು ಒತ್ತಾಯಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ. ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಏನು ಕ್ರಮ ಕೈಗೊಳ್ಳಲಿದೆ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾರ್ಮಿಕ ಸಚಿವರು):–

ಅ. ಇಲ್ಲ.

ಆ. ಇಲ್ಲ.